# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 659 (706) |
| ಸದಸ್ಯರ ಹೆಸರು | ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 20/12/2021 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್ ಗಳಲ್ಲಿ ಸುಮಾರು ವರ್ಷಗಳಿಂದ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರುಗಳು ಕೋವಿಡ್-19 ಲಾಕ್ ಡೌನ್ ಸಮಯದಲ್ಲಿ ಬಾಕಿ ವೇತನ ಹಾಗೂ ಇತರೆ ಭತ್ಯೆಗಳ ಬಿಡುಗಡೆಗೆ ಸರ್ಕಾರವು ಸಹಾನುಭೂತಿಯಿಂದ ಕ್ರಮ ಕೈಗೊಳ್ಳುವುದೇ; | ಕರ್ನಾಟಕ ರಾಜ್ಯದ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಸುಮಾರು ವರ್ಷಗಳಿಂದ ಅರೆಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರುಗಳಿಗೆ ಕೋವಿಡ್-19ರ ಲಾಕ್‌ಡೌನ್ ಪೂರ್ವದಲ್ಲಿ, ಅಂದರೆ ಮಾರ್ಚ್-2020ರ ಮಾಹೆಯಲ್ಲಿ ಕಾರ್ಯನಿರ್ವಹಿಸಿದ ಅರೆಕಾಲಿಕ ಉಪನ್ಯಾಸಕರಿಗೆ ಏಪ್ರಿಲ್-2020 ರಿಂದ ಆಗಸ್ಟ್-2020ರ ವರೆಗೆ ಅನುದಾನದ ಲಭ್ಯತೆಯ ಮೇರೆಗೆ ಕೋವಿಡ್-19ರ ವಿಶೇಷ ಗೌರವಧನವನ್ನು ಪಾವತಿಸಲಾಗಿರುತ್ತದೆ. |
| ಆ) | ಅನೇಕ ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ವೇತನ ನೇಮಕಾತಿ ನಿಯಮಗಳಿಂದ ಈಗಾಗಲೇ ಅರೆಕಾಲಿಕ ಸೇವೆ ಸಲ್ಲಿಸುತ್ತಿರುವ ಉಪನ್ಯಾಸಕರುಗಳಿಗೆ ತೊಂದರೆ ಯಾಗುತ್ತಿದ್ದು, ಈ ಲೋಪದೋಷಗಳನ್ನು ಸರಿಪಡಿಸಲು ಕ್ರಮ ಕೈಗೊಳ್ಳುವುದೇ? (ಮಾಹಿತಿ ಒದಗಿಸುವುದು) | ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳಿಗೆ ಮಾಸಿಕ ಗೌರವಧನವನ್ನು ರೂ. 7500/- ರಿಂದ 12500/- ಕ್ಕೆ ಹೆಚ್ಚಿಸಲಾಗಿದೆ.<br><br>2021-22ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅನುಗುಣವಾಗಿ ಅಗತ್ಯ ಶೈಕ್ಷಣಿಕ ವಿದ್ಯಾರ್ಹತೆಯನ್ನು ಹೊಂದಿರುವ ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆದುಕೊಳ್ಳಲು ಪ್ರಾಂಶುಪಾಲರಿಗೆ ಅನುಮತಿ ನೀಡಲಾಗಿದೆ. ಅಂತಹ ಸಂದರ್ಭದಲ್ಲಿ ಈ ಹಿಂದೆ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿದ ಅತಿಥಿ ಉಪನ್ಯಾಸಕರಿಗೆ ಆದ್ಯತೆ ನೀಡಲಾಗಿರುತ್ತದೆ. |

ಸಂಖ್ಯೆ: ಇಡಿ 100 ಹೆಚ್‌ಪಿಟಿ 2021)

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು.